# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೃಷಿ ಇಲಾಖೆಯ 2019-20ನೇ ಸಾಲಿನ ರಾಜ್ಯವಲಯ ಯೋಜನೆಗಳಿಗೆ ಮೊದಲನೇ ತ್ರೈಮಾಸಿಕ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಕೃಇ 41 ಕೃಯೋಕಾ 2018, ದಿನಾಂಕ: 02-04-2019.
2. ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2019 ದಿನಾಂಕ: 03-04-2019.
3. ಕೃಷಿ ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಪಿಎಲ್‌ಎನ್/ತಾಂ-1/ಅನುದಾನ ಬಿಡುಗಡೆ/2019-20 ಬೆಂಗಳೂರು, ದಿ: 03-04-2019

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ 2018-19ನೇ ಸಾಲಿನಲ್ಲಿ ಕೃಷಿ ಇಲಾಖೆಯಲ್ಲಿ ಚಾಲ್ತಿಯಲ್ಲಿದ್ದ ಯೋಜನೆಗಳನ್ನು 2019-20ನೇ ಸಾಲಿನಲ್ಲಿ ಮುಂದುವರೆಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಮೇಲೆ ಓದಲಾದ (2)ರ ಆದೇಶದನ್ವಯ ರಾಜ್ಯ ಯೋಜನೆಗಳಿಗೆ ಆಯವ್ಯಯದಲ್ಲಿ ಒದಗಿಸಿರುವ ಅನುದಾನದಲ್ಲಿ ಶೇ.25 ರಂತೆ ಅನುದಾನ ಬಿಡುಗಡೆ ಮಾಡಲು ಸರ್ಕಾರದ ಕಾರ್ಯದರ್ಶಿಗಳಿಗೆ ಆರ್ಥಿಕ ಅಧಿಕಾರ ಪ್ರತ್ಯಾಯೋಜಿಸಲಾಗಿದೆ.

ಮೇಲೆ ಓದಲಾದ (3)ರ ಪ್ರಸ್ತಾವನೆಯಲ್ಲಿ ಕೃಷಿ ಆಯುಕ್ತರು, 2019-20ನೇ ಸಾಲಿನ ಚಾಲ್ತಿ ಯೋಜನೆಗಳಲ್ಲಿ ಮುಂದುವರೆಸಲಾಗಿರುವ ಒಟ್ಟು 13 ಯೋಜನಾ ಕಾರ್ಯಕ್ರಮಗಳಿಗೆ ಮೊದಲನೇ ತ್ರೈಮಾಸಿಕಕ್ಕೆ ಆಯವ್ಯಯದ ಲೆಕ್ಕಶೀರ್ಷಿಕೆಯಡಿ ಒದಗಿಸಲಾದ ಅನುದಾನದಲ್ಲಿ ಒಟ್ಟು ರೂ.52031.57 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಕೃಷಿ ಆಯುಕ್ತರು ಸಲ್ಲಿಸಿರುವ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಕೃಇ 57 ಕೃಯೋಕಾ 2019, ಬೆಂಗಳೂರು, ದಿನಾಂಕ: 20-04-2019

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, 2019-20ನೇ ಸಾಲಿನಲ್ಲಿ ಮುಂದುವರೆಸಲಾದ ಈ ಕೆಳಕಂಡ 13 ರಾಜ್ಯವಲಯ ಯೋಜನೆಗಳಿಗೆ ಮೊದಲನೇ ತ್ರೈಮಾಸಿಕಕ್ಕೆ ಒಟ್ಟು ರೂ.52031.57 ಲಕ್ಷಗಳ (ಐವತ್ತೆರಡು ಸಾವಿರ ಮೂವತ್ತೊಂದು ಲಕ್ಷದ ಮತ್ತು ಐವತ್ತೇಳು ಸಾವಿರ ರೂಪಾಯಿಗಳು ಮಾತ್ರ) ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

..2)

(ರೂ.ಲಕ್ಷಗಳಲ್ಲಿ)

| ಕ್ರ ಸಂ. | ಯೋಜನೆ | ಲೆಕ್ಕಶೀರ್ಷಿಕೆ | ಆಯವ್ಯಯದಲ್ಲಿ ಒದಗಿಸಿರುವ ಒಟ್ಟು ಮೊತ್ತ | ಮೊದಲನೇ ತ್ರೈಮಾಸಿಕಕ್ಕೆ ಬಿಡುಗಡೆ ಮಾಡಿರುವ ಅನುದಾನ |
|---|---|---|---|---|
| 1. | ಕೃಷಿ ಆಯುಕ್ತಾಲಯ | 2401-00-001-1-01 | 6217 | 1554.25 |
| 2. | ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಉಪಯೋಜನೆ ಕಾಯ್ದೆ 2013 ರಡಿ ಬಳಕೆಯಾಗದೇ ಇರುವ ಮೊತ್ತ | 2401-00-001-1-75 | 1777.29 | 444.32 |
| 3. | ಕೃಷಿ ಭಾಗ್ಯ | 2401-00-102-0-27 | 25000.00 | 6250.00 |
| 4. | ಇತರೆ ಕೃಷಿ ಯೋಜನೆಗಳು * | 2401-00-102-0-28 | 9119.00 | 2277.25 |
| 5. | ಬೀಜ ಕ್ಷೇತ್ರಗಳು | 2401-00-103-0-01 | 492.00 | 123.00 |
| 6. | ಕೃಷಿ ಪರಿಕರಗಳು ಮತ್ತು ಗುಣಮಟ್ಟ ನಿಯಂತ್ರಣ | 2401-00-103-0-15 | 62323.00 | 15580.75 |
| 7. | ಕೃಷಿ ಕ್ಷೇತ್ರ ಮತ್ತು ಅಭಿವೃದ್ಧಿ ಕೇಂದ್ರಗಳು | 2401-00-104-0-10 | 165.00 | 41.25 |
| 8. | ಸಾವಯವ ಕೃಷಿ | 2401-00-104-0-12 | 7500.00 | 1875.00 |
| 9. | ಕೃಷಿ ವಿಸ್ತರಣೆ ಮತ್ತು ತರಬೇತಿ | 2401-00-109-0-21 | 5402.00 | 1350.50 |
| 10. | ಕೃಷಿ ಮಹಿಳೆಯರು ಮತ್ತು ಯುವಕ ರೈತರ ತರಬೇತಿ ಮತ್ತು ವಿಸ್ತರಣಾ ಕಾರ್ಯಕ್ರಮ (WYTEP) | 2401-00-109-0-80 | 481.00 | 120.25 |
| 11. | ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ (ಹೊಸ ಬೆಳೆ ವಿಮಾ ಯೋಜನೆ) | 2401-00-110-0-07 | 84500.00 | 21125.00 |
| 12. | ಭೂಸಾರದ ಸಮೀಕ್ಷೆ ಮತ್ತು ಪರೀಕ್ಷೆ | 2402-00-101-0-01 | 40.00 | 10.00 |
| 13. | ಕೃಷಿ ಮೂಲಭೂತ ಸೌಕರ್ಯ | 4401-00-001-1-01 | 5120.00 | 1280.00 |
| | ಒಟ್ಟು | | 208136.29 | 52031.57 |

* ಚಾಲ್ತಿ ಯೋಜನೆಯ ಮೇಲ್ಕಂಡ ಲೆಕ್ಕಶೀರ್ಷಿಕೆಯಡಿ ಒಟ್ಟು ರೂ.9119.00 ಲಕ್ಷ ಒದಗಿಸಿದ್ದು, ನೆಲಗಡಲೆ ವಿಶೇಷ ಪ್ಯಾಕೇಜ್ ಯೋಜನೆಯ ರೂ.10.00 ಲಕ್ಷ ಹೊರತುಪಡಿಸಿ, ಉಳಿಕೆ ರೂ.9109.00 ಲಕ್ಷಗಳಲ್ಲಿ ಶೇ.25 ರಷ್ಟು ಬಿಡುಗಡೆಗೊಳಿಸಲಾಗಿದೆ.

**ಷರತ್ತುಗಳು:-**

1. 2018-19ನೇ ಸಾಲಿನಲ್ಲಿದ್ದ ಕಾರ್ಯಕ್ರಮ / ಘಟಕಗಳನ್ನು ಮಾತ್ರ 2019-20ನೇ ಸಾಲಿನಲ್ಲಿ ಮುಂದುವರೆಸಲಾಗಿದ್ದು, ಸದರಿ ಕಾರ್ಯಕ್ರಮ / ಘಟಕಗಳಿಗೆ ಮಾತ್ರ ಅನುದಾನ ಬಳಸತಕ್ಕದ್ದು, ಯಾವುದೇ ಹೊಸ ಘಟಕ / ಕಾರ್ಯಕ್ರಮ ಅನುಷ್ಠಾನಗೊಳಿಸಬೇಕಾದ್ದಲ್ಲಿ ಸರ್ಕಾರದ ಆದೇಶ ಸಂಖ್ಯೆ: ಪಿಡಿ 14 ಐಎಂಎಂ 2017, ದಿ:23-03-2017ರನ್ವಯ ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸಿ ಅನುಮೋದನೆ ಪಡೆದ ನಂತರವಷ್ಟೇ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸತಕ್ಕದ್ದು.
2. 2019-20ನೇ ಸಾಲಿನ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪ ಯೋಜನೆಗಳಿಗೆ ನಿಗದಿಪಡಿಸಿದ ಅನುದಾನವನ್ನು ರಾಜ್ಯ ಅನುಸೂಚಿತ ಜಾತಿಗಳು/ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್ತಿನ ಅನುಮೋದನೆ ಪಡೆದ ನಂತರವಷ್ಟೇ ಕಾರ್ಯಕ್ರಮವನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸತಕ್ಕದ್ದು.
3. 2019-20ನೇ ಸಾಲಿನ ವಿಶೇಷ ಅಭಿವೃದ್ಧಿ ಯೋಜನೆಗೆ ಸಂಬಂಧಿಸಿದಂತೆ ಕ್ರಿಯಾ ಯೋಜನೆಯನ್ನು ಯೋಜನಾ ಇಲಾಖೆಯ ವಿಶೇಷ ಅಭಿವೃದ್ಧಿ ಕೋಶದ ಅನುಮೋದನೆ ಪಡೆದ ನಂತರವಷ್ಟೇ ಕಾರ್ಯಕ್ರಮವನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸತಕ್ಕದ್ದು.

--3

4. 2019-20ನೇ ಸಾಲಿನ ಎರಡನೇ ತ್ರೈಮಾಸಿಕಕ್ಕೆ ಅನುದಾನ ಬಿಡುಗಡೆಗೆ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ/04/ಟಿಎಫ್‌ಪಿ/2018, ದಿನಾಂಕ: 08-01-2019 ರಲ್ಲಿ ನೀಡಿರುವ ಮಾರ್ಗಸೂಚಿಯನ್ವಯ ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸತಕ್ಕದ್ದು.

ಈ ಆದೇಶವನ್ನು ಟಿಪ್ಪಣಿ ಸಂ: ಕೃಇ/34/ಆಂಆಸ/2019, ದಿನಾಂಕ: 20-04-2019 ರಲ್ಲಿ ಆಂತರಿಕ ಆರ್ಥಿಕ ಸಲಹೆಗಾರರು ನೀಡಿರುವ ಸಹಮತಿ ಹಾಗೂ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ/01/ಟಿಎಫ್‌ಪಿ/2019, ದಿನಾಂಕ:03-04-2019ರಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ಆರ್ಥಿಕ ಅಧಿಕಾರದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ
BS Nagarathnam
(ಬಿ.ಎಸ್.ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)

ಪ್ರತಿಯನ್ನು:-

1. ಪ್ರಧಾನ ಮಹಾಲೇಖಪಾಲರು, (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್‌ಭವನ", ಅಂಚೆ ಪೆಟ್ಟಿಗೆ ಸಂ: 5398, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು, (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂ: 5398, ಬೆಂಗಳೂರು-01.
3. ಮಹಾಲೇಖಪಾಲರು (ಎ ಮತ್ತು ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂ: 5329, ಬೆಂಗಳೂರು-01.
4. ಆಯುಕ್ತರು/ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
5. ಆಯುಕ್ತರು/ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು
6. ಆಯುಕ್ತರು, ತೋಟಗಾರಿಕೆ ಇಲಾಖೆ, ಬೆಂಗಳೂರು
7. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು
8. ನಿರ್ದೇಶಕರು, ಪರಿಯೋಜನಾ ರಚನಾ ವಿಭಾಗ, ಯೋಜನಾ ವಿಭಾಗ, ಬೆಂಗಳೂರು.
9. ನಿರ್ದೇಶಕರು, ಟಿ.ಎನ್.ಎಂ.ಸಿ. ಖನಿಜ ಭವನ, ಬೆಂಗಳೂರು.
10. ಸರ್ಕಾರದ ಉಪ ಕಾರ್ಯದರ್ಶಿ-1, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು
11. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು
12. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ-4), ವಿಧಾನ ಸೌಧ, ಬೆಂಗಳೂರು
13. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಬೆಂಗಳೂರು
14. ಸರ್ಕಾರದ ಜಂಟಿ/ಉಪ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಇವರ ಆಪ್ತ ಶಾಖೆ.
15. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು.
16. ಜಂಟಿ ನಿರ್ದೇಶಕರು, ಹುಜೂರು ಖಜಾನೆ, ಬೆಂಗಳೂರು.
17. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು ರವರಿಗೆ ಮಾಹಿತಿಗಾಗಿ ನೀಡಲಾಗಿದೆ.(ಕೃಷಿ ಆಯುಕ್ತರ ಮುಖಾಂತರ).
18. ತಾಂತ್ರಿಕ ಅಧಿಕಾರಿಗಳು, ಕೃಷಿ ಯೋಜನಾ ಘಟಕ, ಎ ಮತ್ತು ಬಿ, ಕೃಷಿ ಇಲಾಖೆ.
19. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.